26	26. ಹಾವೇರಿ	85. ಹಾವೇರಿ 86. ಹಾನಗಲ್ 87. ಹಿರೇಕೆರೂರು 88. ಸವಣೂರು 89. ಶಿಗ್ಗಾಂವ

ಮಿನಿ ವಿಧಾನಸೌಧ ನಿರ್ಮಾಣ

28(24) ಶ್ರೀ ರಮಾನಾಥ್ ರೈ ಬಿ:(ಬಂಟ್ವಾಳ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಸಕ್ತ ವರ್ಷ ತಾಲ್ಲೂಕುಗಳಲ್ಲಿ ಮಿನಿ ವಿಧಾನಸೌಧವನ್ನು ನಿರ್ಮಾಣ ಮಾಡುವ ಉದ್ದೇಶ ಸರ್ಕಾರದ ಮುಂದಿರುವುದೇ;

ಆ) ಮುಂದಿದ್ದಲ್ಲಿ, ಬಂಟ್ವಾಳ ತಾಲ್ಲೂಕಿಗೆ ಮಿನಿ ವಿಧಾನಸೌಧ ಮಂಜೂರಾತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದೇ;

ಇ) ಮುಂದಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಜಿ ಕರುಣಾಕರ ರೆಡ್ಡಿ(ಕಂದಾಯ ಸಚಿವರು):

ಅ) ಅನುದಾನ ಲಭ್ಯತೆಗೊಳಪಟ್ಟು ತಾಲ್ಲೂಕು ಮಟ್ಟದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲಾಗುತ್ತದೆ.

ಆ) ಬಂಟ್ವಾಳ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ನಿರ್ಮಿಸುವ ಕಾಮಗಾರಿಯು ಹೊಸ ಕಾಮಗಾರಿಯಾಗಿದ್ದು, 2010-11ನೇ ಸಾಲಿನ ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆಯನ್ನು ಆಧರಿಸಿ ಈ ಹೊಸ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

ಇ) ಪ್ರಸ್ತುತ ಸಾಲಿನಲ್ಲಿ ಅನುದಾನ ಲಭ್ಯತೆ ಆಧರಿಸಿ ಇಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡುವ ಕುರಿತು ಪ್ರಸ್ತಾವನೆಯನ್ನು ಪರಿಶೀಲಿಸಲಾಗುವುದು.

ವಿಶ್ವೇಶ್ವರಯ್ಯ ನಾಲೆಗಳಲ್ಲಿ ಹೂಳು ತುಂಬಿರುವುದು